ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ (ವಿ)/ಯ.ವ/ತಾಂ.ಮ/ 08 /24-25,

ಕಾರ್ಯಪಾಲಕ ಅಭಿಯಂತರು(ವಿದ್ಯುತ್)ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 08/11/2024

ತಾಂತ್ರಿಕ ಮಂಜೂರಾತಿ

ವಿಷಯ:- **Repairs and Shifting of existing High Masts to road side and trenchless cabling work in Yelahanka Zone.**

ಉಲ್ಲೇಖ:- 1. ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ:27-07-2021 ರ ಮೇರೆಗೆ

2. ಅಂದಾಜು ಮೊತ್ತ: **ರೂ.10.00 ಲಕ್ಷಗಳು**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಯಲಹಂಕ ವಲಯರವರು ಈ ಕೆಳಗಿನ ಕಾಮಗಾರಿಗೆ 2024-25 ನೇ ಸಾಲಿನ ಅಯವ್ಯಯದ ಲೆಕ್ಕ ಶಿರ್ಷಿಕೆ-**P0298** ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ **ವಾರ್ಡ್ ಸಂಖ್ಯೆ 01 ರಿಂದ 04** ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೈಮಾಸ್ಟ್‌ಗಳನ್ನು ರಸ್ತೆ ಬದಿಯಿಂದ ಟ್ರೆಂಚ್‌ಲೆಸ್ ಕೇಬಲ್‌ಗಳ ಮೂಲಕ ಸ್ಥಳಾಂತರಿಸಿ ದುರಸ್ಥಿಗೊಳಿಸುವ ಕಾಮಗಾರಿಗೆ ಕೆ.ಪಿ.ಡಬ್ಲ್ಯುಡಿ. 2023-24 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿದೆ. ಮಾನ್ಯ ಮುಖ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು 2024-25 ನೇ ಸಾಲಿನ ವಿದ್ಯುತ್ ಕ್ರಿಯಾ ಯೋಜನೆಯನ್ನು ಸದರಿ ಕಾಮಗಾರಿಯನ್ನು **"ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ನಡವಳಿಗಳು ವಿಷಯದ ಸಂಖ್ಯೆ:167/2024-25, ದಿನಾಂಕ:11.09.2024"** ರಲ್ಲಿ ಅನುಮೋದಿಸಿರುವ ಮೇರೆಗೆ ತಮ್ಮ ಅವಗಾಹನೆಗೆ ತರುತ್ತಾ, ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಉಲ್ಲೇಖ (01) ರಂತೆ ನೀಡಿರುವ ಅಧಿಕಾರದನ್ವಯ ಆಡಳಿತಾತ್ಮಕ ಮಂಜೂರಾತಿಯ ಅನುಮೋದನೆ ನೀಡಿದೆ.

ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಹಾಗೂ ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ:132 to 133 ಕ್ರ.ಸಂ.08 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಬಿಬಿಎಂಪಿ, ಯಲಹಂಕ ವಲಯ

ಪ್ರತಿಯನ್ನು: 1. ಅಧೀಕ್ಷಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ.

2. ಕಛೇರಿ ಕಡತಕ್ಕೆ.